# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೩<br>Part – III | ಬೆಂಗಳೂರು, ಗುರುವಾರ, ೨೩, ಏಪ್ರಿಲ್, ೨೦೨೬ (ವೈಶಾಖ, ೦೩, ಶಕವರ್ಷ, ೧೯೪೮)<br>BENGALURU, THURSDAY, 23, APRIL, 2026 ( VAISHAKHA , 03, SHAKAVARSHA, 1948) | ನಂ. ೩೨೬<br>No. 326 |
|---|---|---|

## ಕರ್ನಾಟಕ ಸರ್ಕಾರ

**ಸಂಖ್ಯೆ:ನಅಇ 40 ಎಂಎಲ್ಆರ್ 2026.**

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, **ದಿನಾಂಕ:22/04/2026.**

## ಅಧಿಸೂಚನೆ

ಸರ್ಕಾರದ ಅಧಿಸೂಚನೆ ಸಂಖ್ಯೆ:ನಅಇ 261 ಎಂಎಲ್ಆರ್ 2022; ದಿನಾಂಕ:15/04/2025 ರನ್ವಯ ಈ ಹಿಂದಿನ ಬೀದರ್ ನಗರಸಭೆಯೊಂದಿಗೆ 06 ಗ್ರಾಮ ಪಂಚಾಯಿತಿಗಳ ಒಟ್ಟು 16 ಗ್ರಾಮಗಳನ್ನು ಸೇರ್ಪಡೆಗೊಳಿಸಿ ಬೀದರ್ ಮಹಾನಗರ ಪಾಲಿಕೆಯನ್ನು ರಚಿಸಲಾಗಿರುತ್ತದೆ. ಈ ಮಹಾನಗರ ಪಾಲಿಕೆಯಲ್ಲಿ ಈ ಹಿಂದೆ ನಗರಸಭೆಯಾಗಿದ್ದ ಅವಧಿಯಲ್ಲಿನ ಒಟ್ಟು 35 ವಾರ್ಡುಗಳ ಚುನಾಯಿತ ಆಡಳಿತ ಮಂಡಳಿಯ ಸದಸ್ಯರು ನಿಯಮಾನುಸಾರ ಬೀದರ್ ಮಹಾನಗರ ಪಾಲಿಕೆಯಲ್ಲಿ ಕಾರ್ಪೊರೇಟರ್ ಗಳಾಗಿ ಮುಂದುವರೆದಿರುತ್ತಾರೆ ಮತ್ತು ನಗರಸಭೆ ಅವಧಿಯಲ್ಲಿ 30 ತಿಂಗಳುಗಳ ಅವಧಿಗೆ ಆಯ್ಕೆಯಾಗಿದ್ದ ಅಧ್ಯಕ್ಷ–ಉಪಾಧ್ಯಕ್ಷರು ಇಲ್ಲಿ ಮೇಯರ್–ಉಪಮೇಯರ್ ಆಗಿ ಮುಂದುವರೆದಿದ್ದು, ಇವರ ಅವಧಿಯು ದಿನಾಂಕ:18/03/2026 ರಂದು ಪೂರ್ಣಗೊಂಡಿರುತ್ತದೆ. ಆದ್ದರಿಂದ ಬೀದರ್ ಮಹಾನಗರ ಪಾಲಿಕೆಯಲ್ಲಿ ಮೇಯರ್–ಉಪಮೇಯರ್ ಗಳನ್ನು ಆಯ್ಕೆ ಮಾಡಬೇಕಾಗಿರುತ್ತದೆ. 2025–26 ರ ಸಾಲಿನಲ್ಲಿ ಬೀದರ್, ರಾಯಚೂರು ಮತ್ತು ಹಾಸನ ಮಹಾನಗರ ಪಾಲಿಕೆಗಳನ್ನು ಹೊಸದಾಗಿ ರಚನೆ ಮಾಡಲಾಗಿದ್ದು, ಈ ಮಹಾನಗರ ಪಾಲಿಕೆಗಳನ್ನೂ ಒಳಗೊಂಡಂತೆ ರಾಜ್ಯದ ಒಟ್ಟು 13 ಮಹಾನಗರ ಪಾಲಿಕೆಗಳಿಗೆ ಮೇಯರ್–ಉಪಮೇಯರ್ ಸ್ಥಾನಗಳ ಮೀಸಲಾತಿ ಪ್ರಕ್ರಿಯೆಯು ಆಡಳಿತಾತ್ಮಕ ಕಾರಣದಿಂದ ಬಾಕಿ ಇರುತ್ತದೆ. ಈ ಹಿನ್ನೆಲೆಯಲ್ಲಿ ಬೀದರ್ ಮಹಾನಗರ ಪಾಲಿಕೆಯಲ್ಲಿ ಪ್ರಸ್ತುತ ಮೇಯರ್–ಉಪಮೇಯರ್ ಸ್ಥಾನಗಳ ಚುನಾವಣೆಗಳನ್ನು ನಡೆಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ, ಆಡಳಿತಾತ್ಮಕ ಹಿತದೃಷ್ಟಿಯಿಂದ ಮುಂದಿನ ಹೊಸ ಚುನಾಯಿತ ಆಡಳಿತ ಮಂಡಳಿಯು ಅಸ್ತಿತ್ವಕ್ಕೆ ಬರುವವರೆಗೂ ಕಾರ್ಯನಿರ್ವಹಣೆಗಾಗಿ ಬೀದರ್ ಮಹಾನಗರ ಪಾಲಿಕೆಗೆ ಆಡಳಿತಾಧಿಕಾರಿಯನ್ನು ನೇಮಕ ಮಾಡಬೇಕಿರುತ್ತದೆ.

ಆದ್ದರಿಂದ, ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರ ನಿಯಮ–509 ರನ್ವಯ ಪ್ರದತ್ತವಾಗಿರುವ ಅಧಿಕಾರದನ್ವಯ ಆಡಳಿತಾತ್ಮಕ ಹಿತದೃಷ್ಟಿಯಿಂದ ಈ ಅಧಿಸೂಚನೆಯನ್ನು ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಬೀದರ್ ಮಹಾನಗರ ಪಾಲಿಕೆಗೆ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ರವರನ್ನು ಆಡಳಿತಾಧಿಕಾರಿಯನ್ನಾಗಿ ನೇಮಕ ಮಾಡಿ ಆದೇಶಿಸಿದೆ

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ ಮಂಜುನಾಥ)**
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಎಂಎ–1&3)

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



THAMMAIAH